SCCH – 01
MVC No.5781/2025
PW1

<u>ಸಾಕ್ಷಿಗೆ ದಿನಾಂಕಃ **12.12.2025** ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ</u>

**<u>ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀ.GKY ರವರಿಂದಃ</u>**

1) ನಾನು ಈ ಪ್ರಕರಣದಲ್ಲಿ ಅರ್ಜಿದಾರಳಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) **ಪ್ರಥಮ ವರ್ತಮಾನ ವರದಿ** ಹಾಜರುಪಡಿಸಿದ್ದು ಅದನ್ನು **ನಿ.ಪಿ.1** ಎಂದು, **ಪೋಲಿಸರಿಗೆ ನೀಡಿರುವ ದೂರನ್ನು ನಿ.ಪಿ.2** ಎಂದು, **ಸ್ಥಳ ಪಂಚನಾಮೆಯನ್ನು** ನಿ.ಪಿ.**3** ಎಂದು, **ಕಚ್ಚಾ ನಕ್ಷೆಯನ್ನು** ನಿ.ಪಿ.**4** ಎಂದು, ಐಎಂವಿ ವರದಿಯನ್ನು ನಿ.ಪಿ.**5** ಎಂದು, ಗಾಯದ ಪ್ರಮಾಣ ಪತ್ರವನ್ನು ನಿ.ಪಿ.**6** ಎಂದು, ಮತ್ತು ಅಂತಿಮ ವರದಿಯನ್ನು ನಿ.ಪಿ.**7** ಎಂದು ಗುರುತಿಸಿದೆ.

**<u>ಸೂಚನೆಃ</u>** ನಿ.ಪಿ.1 ರಿಂದ ನಿ.ಪಿ.7 ಎಂದು ಗುರುತು ಆಗಿರುವ ದಾಖಲೆಗಳು ಮೈಸೂರಿನ ಕೃಷ್ಣರಾಜ ಸಂಚಾರ ಪೋಲಿಸ್ ಠಾಣೆಯವರು ನೀಡಿರುವಂತಹ ಯಥಾ ನಕಲುಗಳು ಆಗಿವೆ.

3) ಈಗ ಸಾಕ್ಷಿದಾರರು ತಮ್ಮ ಮೂಲ ಆಧಾರ್ ಕಾರ್ಡ್ ಮತ್ತು ಪಾನ್ ಕಾರ್ಡ್ ದಾಖಲೆಗಳು ಮತ್ತು ಇದೇ ದಾಖಲೆಗಳ ಫೋಟೋ ಪ್ರತಿಗಳನ್ನು ಹಾಜರುಪಡಿಸಿದ್ದಾರೆ. ಸದರಿ ಮೂಲ ಪ್ರತಿಗಳನ್ನು ಮತ್ತು ಫೋಟೋ ಪ್ರತಿಗಳನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಗಳನ್ನು ಆಧಾರವಾಗಿ ಇಟ್ಟುಕೊಂಡು ಯಾಂತ್ರಿಕ ಸಹಾಯದಿಂದ ಈ ಫೋಟೋ ಪ್ರತಿಗಳನ್ನು ಸಿದ್ಧಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ಫೋಟೋ ಪ್ರತಿಗಳನ್ನು ನಿ.ಪಿ.**8** ಮತ್ತು ನಿ.ಪಿ.**9** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಗಳನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

4) ಮೈಸೂರಿನ ಕೆ.ಆರ್. ಆಸ್ಪತ್ರೆಯವರು ಪೋಲಿಸರಿಗೆ ಕಳುಹಿಸಿರುವ ಇಂಟಿಮೇಷನ್ ಅನ್ನು ನಿ.ಪಿ.**10** ಎಂದು ಮತ್ತು **ಡಿಸ್ಚಾರ್ಜ್ ಸಮ್ಮರಿ ಅನ್ನು** ನಿ.ಪಿ.**11** ಎಂದು ಗುರುತಿಸಿದೆ.

5) ಒಟ್ಟು **8** ಮೆಡಿಕಲ್ ಬಿಲ್ಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**12** ಎಂದು ಗುರುತಿಸಿದೆ.

6) **Outpatient** ದಾಖಲೆಯನ್ನು ನಿ.ಪಿ.**13** ಎಂದು ಮತ್ತು **2 X-ray** ಫಿಲಂಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**14** ಎಂದು ಗುರುತಿಸಿದೆ. ಮತ್ತೆ **3 Outpatient** ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ.**15** ರಿಂದ **17** ಎಂದು

ಗುರುತಿಸಿದೆ.

7) ಆದ ಕಾರಣದಿಂದ ಪ್ರಾರ್ಥನೆಯಂತೆ ನನಗೆ ಪರಿಹಾರವನ್ನು ನೀಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**<u>ಪಾಟೀ ಸವಾಲು: 1 ಮತ್ತು 2 ನೇ ಎದುರುದಾರರ ಪರ ವಕೀಲರಿಂದಃ</u>**

ಸದರಿ ಎದುರುದಾರರು ಮತ್ತು ಅವರ ಪರ ವಕೀಲರು ಹಾಜರಿಲ್ಲ ಮತ್ತು ಯಾವುದೇ ಲಿಖಿತ ಹೇಳಿಕೆ ಸಲ್ಲಿಸಿಲ್ಲ. ಆದ ಕಾರಣದಿಂದ ಯಾವುದೇ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**<u>ಮರು ವಿಚಾರಣೆಃ ಇಲ್ಲ.</u>**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.